ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	846
ಸದಸ್ಯರ ಹೆಸರು	ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	09.03.2021
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕಿನ ನಾಗವಲ್ಲಿಯ ಗಣಿಯಲ್ಲಿ ಜಿಲೆಟಿನ್ ಸ್ಫೋಟದಿಂದ ಅನಾಹುತ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ದುರಂತದಲ್ಲಿ ಆಗಿರುವ ಪ್ರಾಣಹಾನಿ ಹಾಗೂ ಇತರೆ ನಷ್ಟ ಎಷ್ಟು; (ವಿವರ ನೀಡುವುದು)	ಬಂದಿರುತ್ತದೆ. ಸ್ಫೋಟಕ ದುರಂತದಲ್ಲಿ ಆರು ಜನರು ಮೃತಪಟ್ಟಿದ್ದು, ನಷ್ಟದ ಕುರಿತು ಮಾಹಿತಿ ಇರುವುದಿಲ್ಲ.
ಆ)	ಈ ದುರಂತಕ್ಕೆ ಕಾರಣ ಏನು;	ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕು, ಹಿರೇನಾಗವಲ್ಲಿ ಗ್ರಾಮದಲ್ಲಿ ದಿನಾಂಕ 23.02.2021 ರಂದು ಸ್ಫೋಟಕ ಘಟನೆ ಸಂಬಂಧ ಗುಡಿಬಂಡೆ ಪೋಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ 0034/2021ನ್ನು ದಿನಾಂಕ 23.02.2021 ದಾಖಲಿಸಲಾಗಿದ್ದು, ಸದರಿ ಮೊಕದ್ದಮೆಯಲ್ಲಿ ನಮೂದಿಸಿರುವ ಮಾಹಿತಿಯಂತೆ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ದಾಸ್ತಾನು ಮಾಡಲಾಗಿದ್ದ ಸ್ಫೋಟಕಗಳನ್ನು ನಾಶಪಡಿಸುವ ಸಂದರ್ಭದಲ್ಲಿ ಸ್ಫೋಟವು ಸಂಭವಿಸಿರುವುದು ಕಂಡುಬಂದಿರುತ್ತದೆ.
ಇ)	ಇಂತಹ ಅನಾಹುತಗಳು ಮರುಕಳಿಸದಂತೆ ಸರ್ಕಾರ ತೆಗೆದುಕೊಂಡ ಮುನ್ನೆಚ್ಚರಿಕೆಯ ಕ್ರಮಗಳೇನು?	• ರಾಜ್ಯ ವ್ಯಾಪ್ತಿಯಲ್ಲಿನ DGMS ನಿಂದ ಅನುಮತಿ ಪಡೆದು ಗಣಿ ಸುರಕ್ಷತಾ ನಿಯಮಗಳನ್ವಯ ಕಲ್ಲುಗಣಿಗುತ್ತಿಗೆ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುವುದನ್ನು ಕಡ್ಡಾಯಗೊಳಿಸಲಾಗಿರುತ್ತದೆ. • ಜಿಲ್ಲಾ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಅಕ್ರಮ ಸ್ಫೋಟಕಗಳ ಸಂಗ್ರಹ, ಬಳಕೆ ಮತ್ತು ಸಾಗಾಣಿಕೆ ಮಾಡುವ ಹಾಗೂ ಸಮಗ್ರ ಗಣಿಗಾರಿಕೆ ಬಗ್ಗೆ ಜಂಟಿಯಾಗಿ ತಪಾಸಣೆ ನಡೆಸಿ ಆಡಿಟ್ ಮಾಡಿ ವರದಿಯನ್ನು ಸಿದ್ಧಪಡಿಸಿ, ತಪ್ಪಿತಸ್ಥ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು. • ರಾಜ್ಯ ವ್ಯಾಪ್ತಿಯಲ್ಲಿ ಕಲ್ಲುಗಣಿ ಸುರಕ್ಷತೆ ಮತ್ತು ಅನಧಿಕೃತ ಗಣಿಗಾರಿಕೆ ತಡೆ ಮಾಸಿಕ ಸಪ್ತಾಹವನ್ನು ಆಚರಿಸಲು ಕ್ರಮ ಕೈಗೊಳ್ಳಲಾಗಿದೆ. • ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಬಾಕಿ ಇರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ಪ್ರತಿ ತಿಂಗಳು ಮೊದಲನೇ ಶನಿವಾರ ವಿಭಾಗವಾರು ಗಣಿ ಅದಾಲತ್ ನಡೆಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ ಸಿಐ 124 ಎಂಎಂಎನ್ 2021

(ಮುರುಗೇಶ್ ಆರ್. ನಿರಾಣಿ)
ಗಣಿ ಮತ್ತು ಭೂವಿಜ್ಞಾನ ಸಚಿವರು.